**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 445/2024**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಮಹದೇವಸ್ವಾಮಿ ಮತ್ತು ಇತರರು

**:: ದೋಷಾರೋಪಣೆ ::**

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

1) ಶ್ರೀ.ಮಹದೇವಸ್ವಾಮಿ ಬಿನ್ ಲೇಟ್ ಸಿದ್ದಲಿಂಗಪ್ಪ,
ವಯಸ್ಸು ಸುಮಾರು 43 ವರ್ಷ,
2) ಶ್ರೀ.ಬಸವರಾಜು ಬಿನ್ ಲೇಟ್ ಸಿದ್ದಲಿಂಗಪ್ಪ,
ವಯಸ್ಸು ಸುಮಾರು 50 ವರ್ಷ,
3) ಶ್ರೀ.ಸೋಮಣ್ಣ. ಕೆ.ಎಸ್. ಬಿನ್ ಲೇಟ್ ಸಿದ್ದಲಿಂಗಪ್ಪ,
ವಯಸ್ಸು ಸುಮಾರು 448 ವರ್ಷ,
4) ಶ್ರೀ.ಶಿವಶಂಕರ. ಎಸ್ ಬಿನ್ ಲೇಟ್ ಸಿದ್ದಲಿಂಗಪ್ಪ,
ವಯಸ್ಸು ಸುಮಾರು 56 ವರ್ಷ,
5) ಶ್ರೀ.ಸಿದ್ದಲಿಂಗಸ್ವಾಮಿ ಬಿನ್ ಮಲ್ಲಪ್ಪ,
ವಯಸ್ಸು ಸುಮಾರು 35 ವರ್ಷ,

ನಂಜನಗೂಡು ತಾಲ್ಲೂಕಿನ ಕಣೇನೂರು ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:-

ಮೊದಲನೆಯದಾಗಿ ದಿನಾಂಕ 10.01.2024 ರಂದು ಮಧ್ಯಾಹ್ನ 01.30 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಜೆ.ಪಿ ಹುಂಡಿ ಗ್ರಾಮದಲ್ಲಿರುವ ಶ್ರೀ.ಸಂಗರಾಜಪ್ಪರವರ ಮನೆಯ ಮುಂಭಾಗದಲ್ಲಿರುವ ಸಾರ್ವಜನಿಕ ರಸ್ತೆಯ ಬಳಿ ಚಾಸಾ-5-ಶ್ರೀ.ನಾಗೇಶರವರು ತಮ್ಮ ಮನೆಯ ಮುಂಭಾಗದ ರಸ್ತೆಯಲ್ಲಿ ಭತ್ತದ ಹುಲ್ಲು ಹಾಕಿರುವ ವಿಚಾರದಲ್ಲಿ ಚಾಸಾ-5 ಮತ್ತು ಶ್ರೀ.ಗಿರೀಶರವರಿಗು ಮಾತಿಗೆ ಮಾತು ಬೆಳೆದು ಏರು ಧ್ವನಿಯಲ್ಲಿ ಮಾತನಾಡುತ್ತಿದ್ದು, ಇಬ್ಬರನ್ನು ಸಮಾಧಾನ ಪಡಿಸಲು ಚಾಸಾ-1-

ಶ್ರೀಮತಿ.ಸುಶೀಲ ಮತ್ತು ಚಾಸಾ-2-ಶ್ರೀ.ಮಲ್ಲಿಕಾರ್ಜುನಸ್ವಾಮಿರವರು ಬಂದಾಗ ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ-1 ರವರನ್ನು ಉದ್ದೇಶಿಸಿ "ಏಕೆ ಗಲಾಟೆ ಬಿಡಿಸಲು ಬಂದಿದ್ದೀಯಾ ಸೂಳೆ ಮುಂಡೆ" ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರ ಜೊತೆ ಜಗಳ ತೆಗೆದು ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಸ್ಥಳದಲ್ಲಿಯೇ ಬಿದ್ದಿದ್ದ ಮಾರಕಾಯುಧವಾದ ದೊಣ್ಣೆಯನ್ನು ತೆಗೆದುಕೊಂಡು ಚಾಸಾ-1 ರವರ ಬಲಗಾಲಿಗೆ, ಎದೆಗೆ ಮತ್ತು ಸೊಂಟಕ್ಕೆ ಹೊಡೆದಿದ್ದಲ್ಲದೆ, 2 ನೇ ಆರೋಪಿಯಾದ ನೀವು ಅದೇ ದೊಣ್ಣೆಯಿಂದ ಚಾಸಾ-2 ರವರ ರವರ ತಲೆಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರ ಜೊತೆ ಜಗಳ ತೆಗೆದು ಚಾಸಾ-1 ರವರನ್ನು ಸಾರ್ವಜನಿಕವಾಗಿ ಹಿಡಿದು ಎಳೆದಾಡಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಚಾಸಾ-1 ರವರ ಮೇಲೆ ಅಪರಾಧಿಕ ಬಲ ಪ್ರಯೋಗ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 3 ನೇ ಆರೋಪಿಯಾದ ನೀವು ನಿಮ್ಮ ಕೈಯಿಂದ ಚಾಸಾ-2 ರವರ ಬೆನ್ನಿಗೆ ಹೊಡೆದಿದ್ದ, 4 ನೇ ಆರೋಪಿಯಾದ ನೀವು ನಿಮ್ಮ ಕೈಯಿಂದ ಚಾಸಾ-2 ರವರ ಬೆನ್ನಿಗೆ ಹೊಡೆದಿದ್ದು, 5 ನೇ ಆರೋಪಿಯಾದ ನೀವು ನಿಮ್ಮ ಕೈಯಿಂದ ಚಾಸಾ-2 ರವರ ತಲೆಗೆ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ

ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 5 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 5 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 29.09.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.